# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 07-05-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು
3. ಶ್ರೀ ಪಾಷಾ, ಸ್ಥಳೀಯರು,
4. ಶ್ರೀಮತಿ ರೋಸಿತಾ ಸ್ಥಳೀಯರು,
5. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
6. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ಬೆಂಗಳುರು ಮಹಾನಗರ ಪಾಲಿಕೆಯಿಂದ ನಿಯೋಜಿಸಿರುವ ಖಾಯಂ ಪೌರಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದು, ಕೆಲವು ಪೌರ ಕಾರ್ಮಿಕರು ಸಮವಸ್ತ್ರವನ್ನು ಧರಿಸದೇ ಕೆಲಸಕ್ಕೆ ಬರುತ್ತಿರುತ್ತಿದ್ದು, ಈ ಬಗ್ಗೆ ಘನತ್ಯಾಜ್ಯ ನಿರ್ವಹಣೆ ಅಧಿಕಾರಿಗಳು ಗಮನ ಹರಿಸಿ, ಎಲ್ಲಾ ಖಾಯಂ/ಡಿ.ಪಿ.ಎಸ್ ಪೌರಕಾರ್ಮಿಕರು ಕಡ್ಡಾಯವಾಗಿ ಪಾಲಿಕೆಯ ಸಮವಸ್ತ್ರವನ್ನು ಧರಿಸಲು ಸೂಚಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಆರೋಗ್ಯ ಪರಿವೀಕ್ಷಕರ ಗಮನಕ್ಕೆ ತಂದು ಕಡ್ಡಾಯವಾಗಿ ಸಮವಸ್ತ್ರ ಧರಿಸಲು ಕ್ರಮ ವಹಿಸಲು ಸೂಚಿಸಲಾಯಿತು.

- ಮಾರುತಿಸೇವಾನಗರ ವ್ಯಾಪ್ತಿಯ 5ನೇ ಅಡ್ಡರಸ್ತೆ, ಹಚ್ಚಿನ್ಸ್ ರಸ್ತೆ ಹಾಗೂ ಹಚ್ಚಿನ್ಸ್ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಉರಿಯದೇ ಇರುವುದರಿಂದ ರಾತ್ರಿ ಸಮಯದಲ್ಲಿ ಸರಗಳ್ಳತನ ಹೆಚ್ಚಾಗುತ್ತಿದ್ದು, ರಾತ್ರಿ ಸಮಯದಲ್ಲಿ ತುಂಬಾ ತೊಂದರೆಯಾಗುತ್ತಿದ್ದು, ಸದರಿ ಪ್ರದೇಶದಲ್ಲಿ ಕೂಡಲೇ ಬೀದಿ ದೀಪಗಳನ್ನು ಅಳವಡಿಸಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು ಮಾತನಾಡಿ, ಕೂಡಲೇ ಅಂತಹ ಪ್ರದೇಶಗಳಲ್ಲಿ ಬೀದಿ ದೀಪಗಳ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಹೈ ಸ್ಟ್ರೀಟ್ ಅಡ್ಡರಸ್ತೆಯಲ್ಲಿ ಸಾರ್ವಜನಿಕ ಶೌಚಾಲಯವಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ಅದನ್ನು ಕೂಡಲೇ ತೆರವುಗಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಹೈ ಸ್ಟ್ರೀಟ್ ಅಡ್ಡರಸ್ತೆಯಲ್ಲಿರುವ ಸಾರ್ವಜನಿಕ ಶೌಚಾಲಯವನ್ನು ತೆರವುಗೊಳಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

- ವಾರ್ಡ್ ವ್ಯಾಪ್ತಿಯ ಐ.ಓ.ಸಿ ಫ್ಲೈ ಓವರ್, 6ನೇ ಅಡ್ಡರಸ್ತೆಯಲ್ಲಿ ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿದ್ದು, ಇದರಿಂದ ಸದರಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಒತ್ತುವರಿಯಾಗಿದ್ದಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ 3ನೇ ಅಡ್ಡರಸ್ತೆಯ ಬಲಬದಿಯ ಪಾದಾಚಾರಿ ಮಾರ್ಗದಲ್ಲಿ ಫ್ಲವರ್ ಪಾಟ್‌ಗಳನ್ನು ಇಟ್ಟಿರುವುದರಿಂದ ಪಾದಾಚಾರಿಗಳಿಗೆ ತೊಂದರೆಯಾಗುತ್ತಿದ್ದು, ಇದರಿಂದ ಸದರಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಅಭಿಯಂತರರಿಗೆ ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಒತ್ತುವರಿಯಾಗಿದ್ದಲ್ಲಿ ಪಾದಾಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಅಂಗಡಿ ಮಾಲೀಕರು ಅಂಗಡಿಗಳಲ್ಲಿ ಪ್ಲಾಸ್ಟಿಕ್‌ಗಳನ್ನು ಉಪಯೋಗಿಸುತ್ತಿದ್ದು, ಉಪಯೋಗಿಸಿದ ಪ್ಲಾಸ್ಟಿಕ್‌ಗಳನ್ನು ಎಲ್ಲಂದರಲ್ಲಿ ಎಸೆಯುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಲ್ಲದೇ ಆರೋಗ್ಯ ಇಲಾಖೆಯಿಂದ ಈಗಾಗಲೇ ಪ್ಲಾಸ್ಟಿಕ್ ಬ್ಯಾನ್ ಮಾಡಲಾಗಿದ್ದು, ಯಾವುದೇ ಅಂಗಡಿ ಮಾಲೀಕರು ನಿಯಮವನ್ನು ಉಲ್ಲಂಘಿಸುತ್ತಿರುವುದು ಸರ್ವೇ ಸಾಮಾನ್ಯವಾಗಿರುತ್ತದೆ. ಇದನ್ನು ವಾರ್ಡಿನ ಆರೋಗ್ಯ ನಿರೀಕ್ಷಕರುಗಳು ಅಂತಹ ಅಂಗಡಿ ಮಾಲೀಕರ ವಿರುದ್ಧ ಕಠಿಣ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಕಡೆಗಳಲ್ಲಿ ವಿದ್ಯುತ್ ಕಂಬ ಹಾಗೂ ಇತರೆ ಪೋಲ್‌ಗಳಿಗೆ ಅನಧಿಕೃತವಾಗಿ ಕೇಬಲ್‌ಗಳನ್ನು ನೇತು ಹಾಕಿದ್ದು, ಈ ಕೇಬಲ್‌ಗಳು ಹರಿದು ಬಿದ್ದು ಯಾವುದೇ ಸಂದರ್ಭದಲ್ಲಿ ಅನಾಹುತ ಸಂಭವಿಸುವ ಸಾಧ್ಯತೆ ಇರುವುದರಿಂದ, ಅಂತಹ ಕೇಬಲ್‌ಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಅನಧಿಕೃತವಾಗಿ

ಅಳವಡಿಸಿರುವ ಓವರ್ ಹೆಡ್ ಕೇಬಲ್‌ಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ವತಿಯಿಂದ ಕುಡಿಯುವ ನೀರಿನ ಸರಬರಾಜು ಮಾಡುತ್ತಿದ್ದು, ಅತೀ ನಿಧಾನವಾಗಿ ನೀರು ಬರುತ್ತಿದ್ದು, ಇದರಿಂದ ಕೆಲಸ ಕಾರ್ಯಗಳನ್ನು ಬದಿಗಿಟ್ಟು ಬರೀ ನೀರು ತುಂಬಿಸುವ ಕೆಲಸ ಮಾಡಬೇಕಾಗಿರುತ್ತದೆ. ಈ ಬಗ್ಗೆ ಕೂಡಲೇ ಕ್ರಮ ವಹಿಸಿ, ನೀರು ಸರಬರಾಜನ್ನು ತೀವ್ರಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಮಾತನಾಡಿ ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಮೇಜರ್ ರಸ್ತೆಯಲ್ಲಿ ಅನೇಕ ಕಡೆಗಳಲ್ಲಿ ಚರಂಡಿಯ ಸ್ಲಾಬ್‌ಗಳು ಹಾಳಾಗಿದ್ದು, ಇದರಿಂದ ಸಾರ್ವಜನಿಕ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಸಂಬಂಧಪಟ್ಟ ಇಲಾಖೆಯವರ ಗಮನಕ್ಕೆ ತಂದು ಕ್ರಮ ವಹಿಸಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ | ಅಧ್ಯಕ್ಷರು<br>(ನೋಡೆಲ್ ಅಧಿಕಾರಿಗಳು)<br>ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ |

<u>ಪ್ರತಿಯನ್ನು</u>

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.